ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ಸರ್ಕಾರಿ ಶಾಲೆಗಳಿಗೆ ಸ್ವಂತ ಕಟ್ಟಡ

114 (365) ಶ್ರೀ ನೆ. ಲ. ನರೇಂದ್ರಬಾಬು (ಮಹಾಲಕ್ಷ್ಮಿ ಲೇಔಟ್):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಮಹಾಲಕ್ಷ್ಮಿ ಲೇಔಟ್ ವಿಧಾನ ಸಭಾ ಕ್ಷೇತ್ರದಲ್ಲಿರುವ ಸರ್ಕಾರಿ ಶಾಲೆಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ಶಾಲೆಗಳಿಗೆ ಸ್ವಂತ ಕಟ್ಟಡ ಇದೆ ಹಾಗೂ ಎಷ್ಟು ಶಾಲೆಗಳು ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದೆ. [ವಿವರ ನೀಡುವುದು]

ಇ) ಸ್ವಂತ ಕಟ್ಟಡವಿಲ್ಲದೆ ಇರುವ ಸರ್ಕಾರಿ ಶಾಲೆಗಳಿಗೆ ನಿವೇಶನ ನೀಡಲು ಸರ್ಕಾರಕ್ಕೆ ಇರುವ ತೊಡಕುಗಳೇನು; ಇನ್ನು ಎಷ್ಟು ಕಾಲಾವಕಾಶ ಬೇಕಾಗುತ್ತದೆ. [ವಿವರ ನಿಡುವುದು]

ಶ್ರೀ ವಿಶ್ವೇಶ್ವರ ಹೆಗೆಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಬಂದಿದೆ.

ಆ) ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದಲ್ಲಿ ಸ್ವಂತ ಕಟ್ಟಡ ಇರುವ ಸರ್ಕಾರಿ ಶಾಲೆಗಳ ಸಂಖ್ಯೆ: 09.

ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದಲ್ಲಿ ಸ್ವಂತ ಕಟ್ಟಡ ಇಲ್ಲದೇ ಇರುವ ಸರ್ಕಾರಿ ಶಾಲೆಗಳ ಸಂಖ್ಯೆ: 05.

ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳು–02

1) ಸ.ಉ.ಹಿ.ಪ್ರಾ. ಶಾಲೆ, ಕುರುಬರಹಳ್ಳಿ

2) ಸ.ಹಿ.ಪ್ರಾ. ಶಾಲೆ, ಮಹಾಲಕ್ಷ್ಮೀಪುರಂ

ಬಾಡಿಗೆ ರಹಿತ ಕಟ್ಟಡದಲ್ಲಿ ನಡೆಯುತ್ತಿರುವ ಶಾಲೆಗಳು–03

1) ಸರ್ಕಾರಿ ಕಿ.ಪ್ರಾ. ಶಾಲೆ, ಮಹಾತ್ಮಗಾಂಧಿನಗರ – ಸೇವಾಭಾರತಿ ಸಂಸ್ಥೆಯವರು ಒದಗಿಸಿರುವ ಕಟ್ಟಡದಲ್ಲಿ ನಡೆಯುತ್ತಿದೆ.

2) ಸ.ಕಿ.ಪ್ರಾ. ಶಾಲೆ, ಕಮಲಾನಗರ ಸ್ಲಂ – ಸಮುದಾಯ ಭವನದ ಕಟ್ಟಡದಲ್ಲಿ ನಡೆಯುತ್ತಿದೆ.

3) ಸ.ಕಿ.ಪ್ರಾ. ಶಾಲೆ, ಅಶೋಕಪುರ ಸ್ಲಂ – ಸಮುದಾಯ ಭವನದಲ್ಲಿ ನಡೆಯುತ್ತಿದೆ.

ಇ) ಸ್ವಂತ ಕಟ್ಟಡವಿಲ್ಲದೇ ಇರುವ ಸರಕಾರಿ ಶಾಲೆಗಳಿಗೆ ಸರ್ಕಾರಿ ನಿವೇಶನ ಲಭ್ಯತೆ ಇಲ್ಲದೇ ಇರುವುದರಿಂದ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸಾಧ್ಯವಾಗಿರುವುದಿಲ್ಲ.

ಸ್ವಂತ ಕಟ್ಟಡವಿಲ್ಲದೇ ಇರುವ ಶಾಲೆಗಳಿಗೆ ಬಿಡಿಎ ವತಿಯಿಂದ ನಿವೇಶನವನ್ನು ಖರೀದಿಸಲು ಸರ್ಕಾರವು ಅನುದಾನ ಬಿಡುಗಡೆ ಮಾಡುತ್ತಿದೆ. ಈ ರೀತಿ ಬಿಡುಗಡೆಯಾದ ಅನುದಾನದಲ್ಲಿ ಸ.ಹಿ.ಪ್ರಾ. ಶಾಲೆ, ಮಹಾಲಕ್ಷ್ಮೀಪುರಂ ಶಾಲೆಗೆ ಸ್ವಂತ ಕಟ್ಟಡ ನಿರ್ಮಿಸಲು ಬಿಡಿಎ ವತಿಯಿಂದ ನಿವೇಶನವನ್ನು ಒದಗಿಸಿಕೊಂಡಿದ್ದು, 30 ವರ್ಷಗಳ ಅವಧಿಗೆ ಲೀಸ್ ಮಾಡಿಕೊಳ್ಳಲಾಗಿದೆ. ನಿವೇಶನ ಸಂಖ್ಯೆ: 3[1]ಎ ಆಗಿದ್ದು ಪ್ರಸ್ತುತ ನಿವೇಶನದ ಬಗ್ಗೆ ಮಂಜುನಾಥ ವಾಣಿಜ್ಯ ಸಂಸ್ಥೆಯವರು ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಿದ್ದು, ಬೇರೊಂದು ನಿವೇಶನವನ್ನು ಸದರಿ ಶಾಲಾ ಕಟ್ಟಡ ನಿರ್ಮಾಣಕ್ಕೆ ಒದಗಿಸಿಕೊಡುವಂತೆ ಆಯುಕ್ತರು, ಬಿಡಿಎ ರವರೊಂದಿಗೆ ವ್ಯವಹರಿಸಲಾಗುತ್ತಿದೆ. ನಗರ ಪ್ರದೇಶದಲ್ಲಿ ಅಗತ್ಯವಿರುವ ಸ್ಥಳಗಳಲ್ಲಿ ನಿವೇಶನಗಳ ಲಭ್ಯತೆ ಕಡಿಮೆ ಇರುವುದರಿಂದ ಇದಕ್ಕೆ ಕಾಲಮಿತಿ ನಿಗದಿಪಡಿಸುವುದು ಕಷ್ಟ. ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ಮತ್ತು ಬಿ.ಬಿ.ಎಂ.ಪಿ. ಜೊತೆ ವ್ಯವಹರಿಸಲಾಗುತ್ತಿದೆ. ಅಗತ್ಯ ನಿವೇಶನಗಳನ್ನು ಪಡೆಯಲು ಪ್ರಯತ್ನಿಸಲಾಗುತ್ತಿದೆ.

ಬೆಂಗಳೂರು ನಗರದ ಮದ್ಯದಂಗಡಿ ಮತ್ತು ಬಾರ್‌ಗಳ ವಿವರ

115 (366) ಶ್ರೀ ನೆ. ಲ. ನರೇಂದ್ರಬಾಬು (ಮಹಾಲಕ್ಷ್ಮಿ ಲೇಔಟ್):– ಮಾನ್ಯ ಅಬಕಾರಿ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಬೆಂಗಳೂರು ನಗರದಲ್ಲಿರುವ 198 ವಾರ್ಡ್‌ಗಳಲ್ಲಿರುವ ಮದ್ಯದಂಗಡಿ ಮತ್ತು ಬಾರ್‌ಗಳ ಸಂಖ್ಯೆ ಎಷ್ಟು;

ಆ) ಇವುಗಳಲ್ಲಿ ಅಧಿಕೃತ ಎಷ್ಟು? ಹಾಗೂ ಅನಧಿಕೃತ ಎಷ್ಟು? (ವಿವರ ನೀಡುವುದು)

ಇ) ಕೆಲವು ಬಾರ್‌ಗಳು ಮುಂಜಾನೆ 6.00 ಘಂಟೆಯಿಂದ ತಡರಾತ್ರಿ 12.00 ಘಂಟೆಯವರೆಗೂ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಹೀಗೆ ಇಷ್ಟು ದೀರ್ಘಕಾಲ ಬಾರ್/ಮಧ್ಯದಂಗಡಿ ತೆರೆಯಲು ಕಾನೂನಿನಲ್ಲಿ ಅವಕಾಶವಿಲ್ಲದಿದ್ದರೂ ಸರ್ಕಾರ ಕ್ರಮ ತೆಗೆದುಕೊಳ್ಳದಿರುವುದಕ್ಕೆ ಕಾರಣವೇನು ಹಾಗೂ ಇಲಾಖೆಗೆ ಇರುವ ತೊಡಕುಗಳೇನು? (ವಿವರ ನೀಡುವುದು)